**All India Radio: Bangalore**
**Regional Bulletin In Kannada**
**30.01.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.01.2025 / 6.40 p.m.**
********************

ಮುಖ್ಯಾಂಶಗಳು

೧. ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳಿಗೆ ಕಡಿವಾಣ ಹಾಕುವ ಸುಗ್ರಿವಾಜ್ಞೆಗೆ ಸಚಿವ ಸಂಪುಟ ಒಪ್ಪಿಗೆ

೨. ಪೊಲೀಸ್ ಇಲಾಖೆಯ ನೇರ ನೇಮಕಾತಿಯಲ್ಲಿ ಪ್ರತಿಭಾನ್ವಿತ ಕ್ರೀಡಾಪಟುಗಳ ಮೀಸಲಾತಿ ಶೇಕಡ ೩ಕ್ಕೆ ಏರಿಕೆ

೩. ೨೦೩೦ರ ವೇಳೆಗೆ ದೇಶದಲ್ಲಿ ವಾರ್ಷಿಕ ೩೦೦ ದಶಲಕ್ಷ ಟನ್ ಉಕ್ಕು ಉತ್ಪಾದನೆ ಗುರಿ - ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

೪. ರಾಷ್ಟ್ರೀಯ ಕ್ರೀಡಾಕೂಟ; ಪುರುಷರ ಸೈಕ್ಲಿಂಗ್ ಸ್ಪರ್ಧೆಯಲ್ಲಿ ರಾಜ್ಯದ ನವೀನ್ ಥಾಮಸ್ ಜಾನ್‌ಗೆ ಚಿನ್ನ

****************

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿ ತಡೆಗೆ ನೂತನ ವಿಧೇಯಕ ತರಲು ಒಪ್ಪಿಗೆ ನೀಡಲಾಗಿದೆ.

ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳಿಗೆ ಕಡಿವಾಣ ಹಾಕುವ ಸುಗ್ರೀವಾಜ್ಞೆಗೆ ಸಚಿವ ಸಂಪುಟ ಒಪ್ಪಿಗೆ ಸೂಚಿಸಿದ್ದು, ರಾಜ್ಯಪಾಲರ ಅಂಕಿತ ಪಡೆಯಲಿದೆ. ಸಂಪುಟ ಸಭೆಯು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ದಿಶೆಯಲ್ಲಿ ಪರಮಾಧಿಕಾರ ನೀಡಿದೆ.

ಈ ಕುರಿತು ಮಾಹಿತಿ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ದಿಟ್ಟ ನಿರ್ಧಾರ ಕೈಗೊಂಡಿದೆ. ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳ ಸಿಬ್ಬಂದಿಯಿಂದ ಕಿರುಕುಳಕ್ಕೆ ಒಳಗಾದ ಜನರು ಸಾವಿನ ಹಾದಿಯನ್ನು ಹಿಡಿಯುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸುಗ್ರೀವಾಜ್ಞೆ ಜಾರಿಗೊಳಿಸಲು ಇಂದಿನ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಸಚಿವ ಎಚ್ ಕೆ ಪಾಟೀಲ್

****************

ಇಂದು ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಗಿದೆ.

ಪೊಲೀಸ್ ಇಲಾಖೆಯ ನೇರ ನೇಮಕಾತಿಯಲ್ಲಿ ಪೇದೆಗಳಿಂದ ಡಿವೈಎಸ್ಪಿ ಹುದ್ದೆವರೆಗೆ ಪ್ರತಿಭಾನ್ವಿತ ಕ್ರೀಡಾಪಟುಗಳ ಮೀಸಲಾತಿ ಪ್ರಮಾಣವನ್ನು ಶೇಖಡ ೨ ರಿಂದ ಶೇಖಡ ೩ಕ್ಕೆ ಹೆಚ್ಚಿಸಲು ಸಂಪುಟ ಒಪ್ಪಿಗೆ ನೀಡಿದೆ.

ಕರ್ನಾಟಕ ಸೇವಾ ಆಯೋಗ ತಿದ್ದುಪಡಿ ನಿಯಮಗಳು ೨೦೨೫ರ ಕರಡನ್ನು ಸಂವಿಧಾನದ ಅನುಚ್ಛೇದ ೩೧೮ ರ ಅನ್ವಯ ರಾಜ್ಯಪಾಲರ ಅನುಮೋದನೆ ಪಡೆದು ರಾಜ್ಯಪತ್ರದಲ್ಲಿ ಪ್ರಕಟಿಸಿ, ಸಲಹೆಗಳನ್ನು ಆಹ್ವಾನಿಸಲು ಸಚಿವ ಸಂಪುಟ ನಿರ್ಧರಿಸಿದೆ.

ಕರಡು ನಿಯಮಗಳಲ್ಲಿ ಯಾವುದೇ ಪ್ರಮುಖ ತಿದ್ದುಪಡಿಗಳನ್ನು ಮಾಡುವ ಅವಶ್ಯಕತೆ ಇಲ್ಲದಿದ್ದಲ್ಲಿ, ನಿಯಮಗಳನ್ನು ಪುನಃ ಸಚಿವ ಸಂಪುಟ ಮುಂದೆ ಮಂಡಿಸದೇ, ಅಂತಿಮಗೊಳಿಸಲು ಇಂದು ನಿರ್ಧರಿಸಲಾಗಿದೆ.

ರಾಜ್ಯ ಮೂಲಸೌಕರ್ಯ ಯೋಜನೆಗಳಿಗೆ ಖಾಸಗಿ ಸಹಭಾಗಿತ್ವ ಅಂದರೆ ಪಿಪಿಪಿ ಕಾರ್ಯನೀತಿ ಅನುಷ್ಠಾನಕ್ಕೆ ಸಚಿವ ಸಂಪುಟ ಒಪ್ಪಿದೆ.

ರಾಜ್ಯದ ಕಿರು ಬಂದರುಗಳಲ್ಲಿ ಸಂಗ್ರಹಿಸುತ್ತಿರುವ ಬಂದರು ಶುಲ್ಕಗಳನ್ನು ಪರಿಷ್ಕರಿಸುವುದು ಅಲ್ಲದೇ, ಕರ್ನಾಟಕ ಜಲಸಾರಿಗೆ ಮಂಡಳಿಯಿಂದ ನಾವೆಗಳ ಪರವಾನಗಿ ಮತ್ತು ವಾರ್ಷಿಕ ಪರವಾನಗಿ ನವೀಕರಣ ಶುಲ್ಕಗಳನ್ನು ಪರಿಷ್ಕರಿಸಲು ನಿರ್ಧರಿಸಲಾಗಿದೆ.

ಹಾಸನ-ಹೊಳೆನರಸೀಪುರ ರೈಲು ಮಾರ್ಗದಲ್ಲಿ ರೈಲ್ವೆ ಕ್ರಾಸಿಂಗ್ ಬದಲು ಮೇಲ್ಸೇತುವೆ ನಿರ್ಮಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಯಿತು.

ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಕಡಣಿ ಗ್ರಾಮದ ಹತ್ತಿರ ಭೀಮಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಅಂದಾಜು ೪೪ ಕೋಟಿ ೫೦ ಲಕ್ಷ ರೂಪಾಯಿಗಳಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಣಯಿಸಿದೆ.

'ಹೊಂಬೆಳಕು' ಯೋಜನೆಯಡಿ ೫೦ ಗ್ರಾಮ ಪಂಚಾಯತಿಗಳಲ್ಲಿ ಸೌರ ಬೀದಿ ದೀಪಗಳನ್ನು ೧೫ ಕೋಟಿ ರೂಪಾಯಿ ವೆಚ್ಚದಲ್ಲಿ ಅಳವಡಿಸುವ ಕಾಮಗಾರಿಗೆ ಒಪ್ಪಿಗೆ ದೊರೆತಿದೆ.

ಬೆಂಗಳೂರಿನ ಜನದಟ್ಟಣೆಯನ್ನು ತಗ್ಗಿಸಲು ಸುತ್ತಮುತ್ತಲಿನ ದೇವನಹಳ್ಳಿ, ನೆಲಮಂಗಲ, ಹೊಸಕೋಟೆ, ದೊಡ್ಡಬಳ್ಳಾಪುರ, ಮಾಗಡಿ ಮತ್ತು ಬಿಡದಿ ಪಟ್ಟಣಗಳನ್ನು ರಸ್ತೆ ಮತ್ತು ರೈಲು ಸಂಪರ್ಕಗಳೊಂದಿಗೆ ಸ್ಯಾಟಲೈಟ್ ಟೌನ್‌ಶಿಪ್‌ಗಳನ್ನಾಗಿ ಅಭಿವೃದ್ಧಿಪಡಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ.

****************

ವಿವಿಧ ಹಣಕಾಸು ಸಂಸ್ಥೆಗಳು, ಸಾಲ ನೀಡಿದ ಮೇಲೆ ಹೇಗೆ ವಸೂಲಾತಿ ಮಾಡಬೇಕೆಂಬ ಬಗ್ಗೆ ನಿಯಮ ಇದೆ. ಸಾಲ ವಸೂಲಾತಿ ಮಾಡುವಾಗ ಗ್ರಾಹಕರಿಗೆ ತೊಂದರೆ ನೀಡಿದಲ್ಲಿ ನಿರ್ದಾಕ್ಷಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಬಾಗಲಕೋಟೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಎಚ್ಚರಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ಹಣಕಾಸು ಸಂಸ್ಥೆಗಳ ಸಿಬ್ಬಂದಿ ಗ್ರಾಹಕರ ಜೊತೆ ವಿನಯದಿಂದ ನಡೆದುಕೊಳ್ಳಬೇಕು. ನಿಯಮ ಬಾಹಿರವಾಗಿ ಸಾಲ ವಸೂಲಾತಿ ಬಗ್ಗೆ ಈಗಾಗಲೇ ಜಿಲ್ಲೆಯಲ್ಲಿ ಒಂದು ಪ್ರಕರಣದ ದಾಖಲಾಗಿದೆ. ದೂರು ಬರದೇ ಇದ್ದರೂ ಸ್ವಯಂ ಪ್ರೇರಿತ ದೂರು ದಾಖಲಿಸಿ, ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

****************

೧೦೩೦ರ ವೇಳೆಗೆ ದೇಶದಲ್ಲಿ ವಾರ್ಷಿಕ ೩೦೦ ದಶಲಕ್ಷ ಟನ್ ಉಕ್ಕು ಉತ್ಪಾದಿಸುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಆಂಧ್ರ ಪ್ರದೇಶದ ವಿಶಾಖಪಟ್ಟಣಂನಲ್ಲಿಂದು ರಾಷ್ಟ್ರೀಯ ಉಕ್ಕು ಕಾರ್ಖಾನೆ- ಆರ್‌ಐಎನ್‌ಎಲ್ ಗೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಆಂಧ್ರ ಪ್ರದೇಶದ ರಾಷ್ಟ್ರೀಯ

ಉಕ್ಕು ಕಾರ್ಖಾನೆ-ಆರ್ಐಎನ್ಎಲ್ ಪುನಶ್ಚೇತನಕ್ಕೆ ೧೧ ಸಾವಿರದ ೪೦೦ ಕೋಟಿ ರೂಪಾಯಿಗಳ ಬೃಹತ್ ಪ್ಯಾಕೇಜ್ ಘೋಷಿಸಲಾಗಿದೆ. ಇದು ಕೇಂದ್ರ ಸರ್ಕಾರ ಕೈಗೊಂಡ ಐತಿಹಾಸಿಕ ನಿರ್ಧಾರವಾಗಿದೆ ಎಂದು ಹೇಳಿದರು.

****************

ಫೆಬ್ರವರಿ ೧ ರಂದು ಮಂಡನೆಯಾಗಲಿರುವ ಕೇಂದ್ರ ಬಜೆಟ್ ಬಗ್ಗೆ ರೈತರು ಹಲವು ಭರವಸೆ ಇಟ್ಟಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಯುವ ಘಟಕದ ಅಧ್ಯಕ್ಷ ಕಲ್ವಮಂಜಲಿ ರಾಮು ಶಿವಣ್ಣ ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕೃಷಿ ಕಾಯ್ದೆಗಳನ್ನು ವಾಪಸ್ಸು ಪಡೆದ ನಂತರ ರೈತರಿಗೆ ಪೂರಕವಾದ ಯೋಜನೆಗಳನ್ನು ಕೇಂದ್ರ ಸರ್ಕಾರ ಜಾರಿ ಮಾಡುವುದರೊಂದಿಗೆ ವೈಜ್ಞಾನಿಕ ಬೆಲೆಯನ್ನು ನಿಗದಿ ಮಾಡಬೇಕು. ಪ್ರತಿ ಎಪಿಎಂಸಿ ಮಾರುಕಟ್ಟೆಗಳಲ್ಲಿ ಆನ್‌ಲೈನ್ ಮಾರ್ಕೆಟಿಂಗ್ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.

ಧ್ವನಿ : ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಯುವ ಘಟಕದ ಅಧ್ಯಕ್ಷ ಕಲ್ವಮಂಜಲಿ ರಾಮು ಶಿವಣ್ಣ

****************

ವಿಶ್ವದೆಲ್ಲೆಡೆ ಹೆಚ್ಚುತ್ತಿರುವ ದಿವ್ಯಾಂಗರ ಸಮಸ್ಯೆಗಳನ್ನು ಪರಿಹರಿಸುವ ತುರ್ತು ಅಗತ್ಯವಿದೆ ಎಂದು ರಾಷ್ಟ್ರೀಯ ವೈದ್ಯಕೀಯ ಮಂಡಳಿ ಅಧ್ಯಕ್ಷ ಡಾ.ಬಿ.ಎನ್.ಗಂಗಾಧರ್ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನ ನಿಮ್ಹಾನ್ಸ್ ಸಭಾಭವನದಲ್ಲಿ ನಡೆದ ಭಾರತೀಯ ಅಸೋಸಿಯೇಶನ್ ಆಫ್ ಫಿಸಿಕಲ್ ಮೆಡಿಸಿನ್ ಮತ್ತು ಪುನರ್ವಸತಿ ಕುರಿತ ರಾಷ್ಟ್ರೀಯ ಸಮ್ಮೇಳನದಲ್ಲಿ ಮಾತನಾಡಿದ ಅವರು, ರೋಗಿಗಳಿಗೆ ಪುನರ್ವಸತಿಯು ಅತೀ ಕಡಿಮೆ ದರದಲ್ಲಿ ಸಿಗಬೇಕಾದ ಅಗತ್ಯವನ್ನು ಪ್ರತಿಪಾದಿಸಿದರು.

ನಿಮ್ಹಾನ್ಸ್‌ನ ನಿರ್ದೇಶಕಿ ಡಾ. ಪ್ರತಿಮಾ ಮೂರ್ತಿ ಮಾತನಾಡಿ, ರೋಗಿಗಳಿಗೆ ಸಮಗ್ರ ಪುನರ್ವಸತಿ ಒದಗಿಸಲು ಸಂಸ್ಥೆಯು ೫೦ ವರ್ಷಗಳಲ್ಲಿ ಯಾವ ರೀತಿ ಕಾರ್ಯಕ್ರಮ ಕೈಗೊಂಡಿದೆ ಎಂಬುದನ್ನು ವಿವರಿಸಿದರು.

ಸಮ್ಮೇಳನದಲ್ಲಿ ದೇಶ ಮತ್ತು ವಿದೇಶದ ೩೦೦ ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದಾರೆ.

****************

ಕಳೆದ ಒಂದು ದಶಕದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಒಟ್ಟು ೬೭೯ ಕುಷ್ಠರೋಗ ಪ್ರಕರಣಗಳು ವರದಿಯಾಗಿದ್ದು, ಪ್ರಸ್ತುತ ಜಿಲ್ಲೆಯಲ್ಲಿ ೩೬ ಕುಷ್ಠರೋಗ ಪ್ರಕರಣಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಸ್.ಮಹೇಶ್ ಕುಮಾರ್ ಮಾಹಿತಿ ನೀಡಿದ್ದಾರೆ.

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಇಂದಿನಿಂದ ಫೆಬ್ರವರಿ ೧೩ ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಂಡಿರುವ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನದ ಕುರಿತು ಅವರು ಮಾತನಾಡಿದರು.

ಮೈಕ್ರೋ ಬ್ಯಾಕ್ಟೀರಿಯಂ ಲೆಪ್ರೆ ಎಂಬ ಸೂಕ್ಷ್ಮಾಣುವಿನಿಂದ ಕುಷ್ಠರೋಗ ಬರುತ್ತದೆ. ಮನುಷ್ಯನ ದೇಹದ ಯಾವುದೇ ಭಾಗದಲ್ಲಿ ಸ್ಪರ್ಶ ಜ್ಞಾನವಿಲ್ಲದ ತಿಳಿ ಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳು, ಕೂದಲು ನವೆ, ತುರಿಕೆ ಇಲ್ಲದಿರುವುದು, ಕೈ ಕಾಲುಗಳಲ್ಲಿ ಜೋಮು ಹಿಡಿಯುವುದು, ಸ್ಪರ್ಶ ಜ್ಞಾನ ಇಲ್ಲದಿರುವುದು, ಮುಖದಲ್ಲಿ ಮತ್ತು ಕಿವಿಗಳ ಮೇಲೆ ಎಣ್ಣೆ ಸವರಿದಂತೆ ಹೊಳೆಯುವುದು, ಗಂಟುಗಳು ಕಾಣಿಸುವುದು ಸೇರಿದಂತೆ ಇತರೆ ಲಕ್ಷಣಗಳು ಕಾಣಿಸಿಕೊಂಡರೆ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ವಿವರಿಸಿದರು.

ಶಾಲಾ-ಕಾಲೇಜುಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕುಷ್ಠರೋಗದ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದು ಡಾ.ಎಸ್.ಎಸ್.ಮಹೇಶ್ ಕುಮಾರ್ ಮಾಹಿತಿ ನೀಡಿದರು.

****************

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಕ್ರೀಡಾಕೂಟದ ಪುರುಷರ ರಸ್ತೆ ಸೈಕಲಿಂಗ್ ಸ್ಪರ್ಧೆಯಲ್ಲಿ ಕರ್ನಾಟಕದ ನವೀನ್ ಥಾಮಸ್ ಜಾನ್, ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ.

ಇದೇ ವೇಳೆ ಮಹಿಳೆಯರ ರಸ್ತೆ ಸೈಕ್ಲಿಂಗ್‌ನಲ್ಲಿ ರಾಜ್ಯದ ಮೇಘಾ ಗೂಗಾಡ ಕಂಚಿನ ಪದಕ ಗೆದ್ದಿದ್ದಾರೆ.

ವಿಜಯಪುರದ ಮೇಘಾ ೪೫ ನಿಮಿಷ ೫೩ ಸೆಕೆಂಡ್‌ಗಳಲ್ಲಿ ಗುರಿ ತಲುಪಿ, ೩ನೇ ಸ್ಥಾನಕ್ಕೆ ತೃಪ್ತಿಪಟ್ಟರೆ, ಮಹಾರಾಷ್ಟ್ರದ ಪೂಜಾ ಬಬನ್ ದಾನೊಲೆ ಚಿನ್ನ ಮತ್ತು ರಾಜಸ್ಥಾನದ ಮೋನಿಕಾ ಜಾಟ್ ಬೆಳ್ಳಿ ಪದಕ ತಮ್ಮದಾಗಿಸಿಕೊಂಡಿದ್ದಾರೆ.

****************

ಮಕ್ಕಳ ಸಮಸ್ಯೆಗಳಿಗೆ ಚುರುಕಾಗಿ, ರಚನಾತ್ಮಕವಾಗಿ ಹಾಗೂ ಸಕಾಲಕ್ಕೆ ಸ್ಪಂದಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ್ ಕೋಸಂಬೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

********ಮುಕ್ತಾಯ********